# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:ಚಾಲೆಂಜ್ ಫಂಡ್ ಯೋಜನೆ ಅಡಿಯಲ್ಲಿ ಉನ್ನತಾಧಿಕಾರ ಸಮಿತಿಯ ಅನುಮೋದನೆ ಪಡೆದ ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ ರವರ ಪ್ರಸ್ತಾವನೆಯಾದ "ಶಾಲೆಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಅನುಷ್ಠಾನದ ಪೈಲೆಟ್ ಯೋಜನೆಗೆ" ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 92 ಇಆಸು 2009 ದಿನಾಂಕ:08-07-2010.
2. ದಿನಾಂಕ: 21-12-2013 ರಂದು ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತಾಧಿಕಾರ ಸಮಿತಿ ಸಭೆಯ ನಡವಳಿ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ ರವರ ದಿನಾಂಕ:06-05-2014 ರ ಅ.ಸ. ಪತ್ರ ಸಂಖ್ಯೆ:ಸ.ಶಿ.ಅ/ಅಕ್ಸೆಸ್/ಚಾ.ಫ.ಯೋ/13-14.

ಪ್ರಸ್ತಾವನೆ:

ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ರೂ.10-00 ಕೋಟಿ (ರೂಪಾಯಿ ಹತ್ತು ಕೋಟಿ ಮಾತ್ರ) ಚಾಲೆಂಜ್ ಫಂಡ್ ಸ್ಥಾಪಿಸಲು ಪ್ರಸ್ತಾಪಿಸಿ ಅನುಮೋದಿಸಲಾಗಿದೆ.

ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಉನ್ನತಾಧಿಕಾರ ಸಮಿತಿ ಸಭೆಯ ನಡವಳಿಯಲ್ಲಿ ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ ರವರ ಪ್ರಸ್ತಾವನೆಯಾದ "ಶಾಲೆಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಅನುಷ್ಠಾನದ ಪೈಲೆಟ್ ಯೋಜನೆಗೆ" ಚಾಲೆಂಜ್ ಫಂಡ್ ಅಡಿಯಲ್ಲಿ ರೂ. 10-48 ಲಕ್ಷ (ರೂಪಾಯಿ ಹತ್ತು ಲಕ್ಷ ನಲವತ್ತೆಂಟು ಸಾವಿರ ಮಾತ್ರ) ಅನುದಾನ ಬಿಡುಗಡೆಗೆ ಅನುಮೋದನೆಯನ್ನು ನೀಡಲಾಯಿತು.

ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ:06-05-2014ರ ಅ.ಸ. ಪತ್ರದಲ್ಲಿ ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ ರವರು "ಶಾಲೆಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಅನುಷ್ಠಾನದ ಪೈಲೆಟ್ ಯೋಜನೆಗೆ" ಅನುಮತಿ ಹಾಗೂ ಮಂಜೂರಾಗಿರುವ ಅನುದಾನವಾದ ರೂ.10-48 ಲಕ್ಷಗಳನ್ನು ಬಿಡುಗಡೆ ಮಾಡಲು ಕೋರಿದ್ದಾರೆ. ಸದರಿ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 48 ಇಆಸು 2014 , ಬೆಂಗಳೂರು, ದಿನಾಂಕ:03-06-2014

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ, ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ ರವರ ಪ್ರಸ್ತಾವನೆಯಾದ "ಶಾಲೆಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಅನುಷ್ಠಾನದ ಪೈಲೆಟ್ ಯೋಜನೆ" ಅಳವಡಿಸಲು ಆಡಳಿತಾತ್ಮಕ

ಅನುಮೋದನೆ ಹಾಗೂ ಚಾಲೆಂಜ್ ಫಂಡ್ ಅಡಿಯಲ್ಲಿ ರೂ. 10-48 ಲಕ್ಷ (ರೂಪಾಯಿ ಹತ್ತು ಲಕ್ಷ ನಲವತ್ತೆಂಟು ಸಾವಿರ ಮಾತ್ರ) ಅನುದಾನವನ್ನು ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

2. ಈ ವೆಚ್ಚವನ್ನು ಲೆಕ್ಕಶೀರ್ಷಿಕೆ "2052-00-090-0-25-059" ಆಡಳಿತ ಸುಧಾರಣೆ–ಸವಾಲು ನಿಧಿ–ಇತರೆ ಖರ್ಚು ಅಡಿಯಲ್ಲಿ ಭರಿಸತಕ್ಕದ್ದು.

3. ಈ ಆದೇಶವನ್ನು ದಿನಾಂಕ:21-12-2013 ರಂದು ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತಾಧಿಕಾರ ಸಮಿತಿಯ ಸಭೆಯಲ್ಲಿ ಅನುಮೋದನೆ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಪಿ.ಎ.ಗಾಯತ್ರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ).

ಪ್ರತಿ:

1) ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಪರಿಶೋಧನೆ) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
4) ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ, ಹೊಸ ಸಾರ್ವಜನಿಕ ಕಛೇರಿಗಳ ಆವರಣ, ನೃಪತುಂಗ ರಸ್ತೆ, ಕೆ.ಆರ್.ಸರ್ಕಲ್, ಬೆಂಗಳೂರು.
5) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–12), ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಲೆಕ್ಕಪತ್ರ–1), ವಿಧಾನಸೌಧ, ಬೆಂಗಳೂರು.
7) ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀಧಿ, ಬೆಂಗಳೂರು.
8) ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು